ವಿದ್ಯಾರ್ಥಿ ಸಂಘದ ಉದ್ಘಾಟನಾ ಸಮಾರಂಭ 2021-22

ಹುಬ್ಬಳಿ : ಸ್ಥಳೀಯ ಕೆ.ಎಲ್.ಇ ಸಂಸ್ಥೆಯ ಶಿಕ್ಷಣ ಮಹಾವಿದ್ಯಾಲಯ ಹಾಗೂ ಸ್ನಾತಕೋತ್ತರ ಶಿಕ್ಷಣ ವಿಭಾಗ ವಿದ್ಯಾನಗರ ಹುಬ್ಬಳ್ಳಿಯಲ್ಲಿ ದಿನಾಂಕ 28.04.2022 ರಂದು ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಹಾಗೂ ವಿದ್ಯಾರ್ಥಿ ಸಂಘದ ಉದ್ಘಾಟನಾ ಸಮಾರಂಭ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು .ವಿದ್ಯಾರ್ಥಿ ಸಂಘದ ಉದ್ಘಾಟಕರಾಗಿ ಆಗಮಿಸಿದ ಡಾ. ವಾಯ್.ಎಸ್.ಹನುಮಂತರಾಯ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಧಾರವಾಡ ಅವರು ಪ್ರಶಿಕ್ಷಣಾರ್ಥಿಗಳನ್ನು ಉದ್ದೇಶಿಸಿ ಮಾತನಾಡುತ್ತಾ ಜೀವನದಲ್ಲಿ ಶ್ರೇಷ್ಠ ಮೌಲ್ಯಗಳನ್ನು ಅಳವಡಿಸಿಕೊಂಡು ಮುಂದಿನ ಪೀಳಿಗೆಗೆ ಧಾರೆಯರೆಯಲು ಕರೆಕೊಟ್ಟರು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಡಾ. ಬಸವರಾಜ ಅನಾಮಿ ಪ್ರಾಚಾರ್ಯರು, ಕೆ.ಎಲ್.ಇ ಸಂಸ್ಥೆಯ ಕೆ.ಎಲ್.ಇ ಇನಸ್ಟಿಟ್ಯೂಟ ಆಫ್ ಟೆಕ್ನಾಲಾಜಿ, ಗೋಕುಲ, ಹುಬ್ಬಳ್ಳಿ ಅವರು ಪ್ರಶಿಕ್ಷಣಾರ್ಥಿಗಳಿಗೆ ಶಿಸ್ತನ್ನು ಮೈಗೂಡಿಸಿಕೊಂಡು ನಿತ್ಯ ನಿರಂತರ ಅಧ್ಯಯನ ಮಾಡುವದರಿಂದ ಗುರಿಯತ್ತ ಸಾಗಬಹುದೆಂದು ಕಿವಿ ಮಾತನ್ನು ಹೇಳಿದರು. ಇದೇ ಸಂದರ್ಭದಲ್ಲಿ ಅಧ್ಯಕ್ಷತೆಯನ್ನು ವಹಿಸಿದ್ದ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ ಲಿಂಗರಾಜ ಸಿ ಮುಳ್ಳಳ್ಳಿ ಅವರು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡುತ್ತಾ ಸೋಲನ್ನು ಸವಾಲಾಗಿ ಸ್ವೀಕರಿಸಿ, ಗೆಲವು ಸಾಧಿಸಿ ಮತ್ತೊಬ್ಬರಿಗೆ ಮಾದರಿಯಾಗಿರಬೇಕೆಂದು ತಿಳಿಹೇಳಿದರು. ಈ ಕಾರ್ಯಕ್ರಮದಲ್ಲಿ ಡಾ ಬಸವರಾಜ ಪ್ಪಿ ಹಳೇಮನಿ ಅವರು ಉದ್ಘಾಟಕರನ್ನು, ಮುಖ್ಯ ಅತಿಥಿಗಳನ್ನು ಡಾ ಜಯಶ್ರೀ. ಸಿ. ಕುಂದಗೋಳಮಠ ಅವರು ಹಾಗೂ ಶ್ರೀಮತಿ ಅರ್ಚನಾ ಪೂಜಾರ ಅವರು ಅಧ್ಯಕ್ಷರನ್ನು ಸಭೆಗೆ ಪರಿಚಯಿಸಿದರು. ಕಾರ್ಯಕ್ರಮವು ದ್ವಿತೀಯ ವರ್ಷದ ಪ್ರಶಿಕ್ಷಣಾರ್ಥಿಗಳಾದ ರಚನಾ ಮತ್ತು ಸಂಗಡಿಗರಿಂದ ಪ್ರಾರ್ಥನೆ ಗೀತೆಯೊಂದಿಗೆ ಪ್ರಾರಂಭವಾಯಿತು. ದ್ವಿತೀಯ ವರ್ಷದ ಪ್ರಶಿಕ್ಷಣಾರ್ಥಿಯಾದ ಮೌನೇಶ ಬಡಿಗೇರ ಅವರು ಸ್ವರಚಿತ ಕವನವನ್ನು ಹಾಡಿದರು. ಕಾರ್ಯಕ್ರಮದ ನಿರೂಪಣೆಯನ್ನು ಡಾ ಲಕ್ಷ್ಮೀಭಾಯಿ ಜಾಧವ ಅವರು ನೆರವೇರಿಸಿದರು. ಕೊನೆಯದಾಗಿ ವಂದನಾರ್ಪಣೆ ಕಾರ್ಯಕ್ರಮವನ್ನು ಪ್ರಧಾನ ಕಾರ್ಯದರ್ಶಿಯಾದ ಅಭಿಷೇಕ ಎಲ್ ಅಮಿನಪ್ಪಗೋಳ ನೆರವೇರಿಸಿದರು. ಕಾರ್ಯಕ್ರಮದಲ್ಲಿ ಎಲ್ಲಾ ಬೋಧಕ ಮತ್ತು ಬೋಧಕೇತರ ಸಿಬ್ಬಂಧಿ ವರ್ಗದವರು ಹಾಗೂ ಪ್ರಥಮ ಮತ್ತು ದ್ವಿತೀಯ ವರ್ಷದ ಪ್ರಶಿಕ್ಷಣಾರ್ಥಿಗಳು ಹಾಜರಿದ್ದರು.